2. ಪುನರ್ ವಿಂಗಡಣೆ ನಂತರ ವಾರ್ಡಗಳ ಸಂಖ್ಯೆ.20
3. ಪುನರ್ ವಿಂಗಡಣೆ ಕಾರ್ಯದ ವೆಚ್ಚ ರೂ.64,615/-

ಇ) ಇಲ್ಲ.
ಈ) ಉದ್ಭವಿಸುವುದಿಲ್ಲ.

ಮಸ್ಕಿ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಗೆ ಪರಿವರ್ತಿಸುವುದು

202 (295) ಶ್ರೀ ಪ್ರತಾಪಗೌಡ ಪಾಟೀಲ್ (ಮಸ್ಕಿ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ಮಸ್ಕಿ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಗಾಗಿ ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಶ್ರೀ ಎಸ್. ಬಾಲಚಂದ್ರ ಜಾರಕಿ ಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು) : -

ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರು ಕರ್ನಾಟಕ ಪುರಸಭೆ ಕಾಯ್ದೆ, 1964ರ ಕಲಂ 3 ಮತ್ತು 349 ರನ್ವಯ ಹಾಗೂ 2001ರ ಜನಗಣತಿಯನ್ವಯ 10,000ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಒಟ್ಟು 247 ಗ್ರಾಮ ಪಂಚಾಯಿತಿಗಳ ಪಟ್ಟಿ ಮಾಡಿ ಮೇಲ್ದರ್ಜೆಗೇರಿಸುವ ಬಗ್ಗೆ ನಗರಾಭಿವೃದ್ಧಿ ಇಲಾಖೆಯ ಅಭಿಪ್ರಾಯ ಕೋರಿದ್ದು, ಸದರಿ ಪಟ್ಟಿಯಲ್ಲಿ ಮಸ್ಕಿ ಗ್ರಾಮ ಪಂಚಾಯತಿಯೂ ಸೇರಿದೆ.

ಆದರೆ, ಕಂದಾಯ ಇಲಾಖೆಯ ಆದೇಶ ಸಂಖ್ಯೆ:ಆರ್‌ಡಿ 70 ಭೂದಪು 2009 ದಿನಾಂಕ: 24.12.2009 ರಲ್ಲಿ ಕರ್ನಾಟಕ ರಾಜ್ಯದಲ್ಲಿ 2011ರ ಜನಗಣತಿಯ ಕಾರ್ಯವು ಪ್ರಗತಿಯಲ್ಲಿರುವುದರಿಂದ ದಿನಾಂಕ: 31.03.2011 ರವರೆಗೆ ಯಾವುದೇ ಪ್ರದೇಶವನ್ನು ಮೇಲ್ದರ್ಜೆಗೇರಿಸದಂತೆ ನಿರ್ಭಂದಿಸಲಾಗಿದೆ. ಆದ್ದರಿಂದ ದಿನಾಂಕ 31.03.2010ರ ನಂತರ ಸದರಿ ವಿಷಯದ ಬಗ್ಗೆ ನಗರಾಭಿವೃದ್ಧಿ ಇಲಾಖೆಯು ಆರ್ಥಿಕ ಹಾಗೂ ಆಡಳಿತಾತ್ಮಕ ನಿರ್ಣಯವನ್ನು ತೆಗೆದುಕೊಳ್ಳಲಾಗುವುದು.